# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 454 (602)
ಸದಸ್ಯರ ಹೆಸರು : ಡಾ|| ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 21.02.2022
ಉತ್ತರಿಸುವವರು : ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಾಡು ಪ್ರಾಣಿಗಳು ರೈತರು ಬೆಳೆದ ಬೆಳೆಗಳನ್ನು ಸಂಪೂರ್ಣವಾಗಿ ನಾಶ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಕಾಡು ಪ್ರಾಣಿಗಳನ್ನು ರೈತರ ಜಮೀನುಗಳಿಗೆ ಬರದಂತೆ ತಡೆಯಲು ತೆಗೆದುಕೊಂಡ ಕ್ರಮವೇನು; | ವನ್ಯ ಪ್ರಾಣಿಗಳ ಹಾವಳಿ ತಡೆಗಟ್ಟಲು ಜಾನುವಾರು ನಿರೋಧಕ ಕಂದಕ, ಚೈನ್ ಲಿಂಕ್ ಮೆಷ್, ಮುಳ್ಳು ತಂತಿ ಬೇಲಿ, ಕಲ್ಲು ತಡೆ ಗೋಡೆ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಅಪಜೀ 116 ಎಫ್‌ಎಪಿ 2016, ದಿ:16.09.2016ರ ಪ್ರಕಾರ ಅರಣ್ಯದಂಚಿನಲ್ಲಿ ಬರುವ ಹಿಡುವಳಿ ಜಮೀನುಗಳಲ್ಲಿ ರೈತರು ಬೆಳೆದ ಬೆಳೆಗಳನ್ನು ವನ್ಯಪ್ರಾಣಿಗಳ ದಾಳಿಯಿಂದ ರಕ್ಷಿಸಲು ರೈತರಿಗೆ ಆರ್ಥಿಕವಾಗಿ ಸಹಾಯ ಮಾಡಲು ಅರಣ್ಯ ಇಲಾಖೆ ಮತ್ತು ಗ್ರಾಮಸ್ಥರ ಸಹಯೋಗದೊಂದಿಗೆ ಸಹಾಯಧನ ರೂಪದಲ್ಲಿ 50:50 ಅನುಪಾತದ ಆಧಾರದಲ್ಲಿ ಸೌರಶಕ್ತಿ ಬೇಲಿಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ರೈತರ ಜಮೀನಿಗೆ 2 ಕಿ.ಮೀ. ಸೋಲಾರ್ ತಂತಿಬೇಲಿ ಅಳವಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ)</td><td>ಕಾಡು ಪ್ರಾಣಿಗಳಿಂದ ಬೆಳೆಗಳು ಹಾನಿಯಾಗಿರುವುದರಿಂದ ಪರಿಹಾರ ಧನ ನೀಡಲು ಸರ್ಕಾರ ಕೈಗೊಂಡ ಕ್ರಮವೇನು?</td><td>ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಬೆಳೆ ಹಾನಿ ಪ್ರಕರಣಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 130 ಎಫ್ ಡಬ್ಲ್ಯುಎಲ್ 2016, ದಿನಾಂಕ: 19/9/2016ರಲ್ಲಿ ನಿಗಧಿಪಡಿಸಿದ ದರಗಳಂತೆ ನಷ್ಟವಾದ ಬೆಳೆಯ ಪ್ರಮಾಣಕ್ಕನುಗುಣವಾಗಿ ಸಂಬಂಧಿತ ರೈತರ ಹೆಸರಿನ ಬ್ಯಾಂಕ್ ಖಾತೆಗೆ ನೇರವಾಗಿ ಇ-ಪರಿಹಾರ ತಂತ್ರಾಂಶದ ಮುಖಾಂತರ ದಯಾತ್ಮಕ ಧನ ಪಾವತಿಸಲಾಗುತ್ತಿದೆ.<br>ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಬೆಳೆಹಾನಿ ಪ್ರಕರಣಗಳ ವಿವರ ಹಾಗೂ ಪಾವತಿಸಿದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ:-
<table>
<tr><th rowspan="2">ವರ್ಷ</th><th colspan="2">ಬೆಳೆಹಾನಿ</th></tr>
<tr><th>ಪ್ರಕರಣಗಳ ಸಂಖ್ಯೆ</th><th>ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td>2019-20</td><td>236</td><td>11.00</td></tr>
<tr><td>2020-21</td><td>286</td><td>11.99</td></tr>
<tr><td>2021-22 (ಜನವರಿ-2022 ರ ಅಂತ್ಯದ ವರೆಗೆ)</td><td>113</td><td>5.83</td></tr>
</table>
</td></tr>
</table>

ಸಂಖ್ಯೆ: ಅಪಜೀ 24 ಎಫ್‌ಡಬ್ಲ್ಯುಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು